# <u>ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ</u>

## <u>ಸಿ.ಸಿ.538/2020</u>

<u>ಸಾಕ್ಷಿದಾರರ ಹೇಳಿಕೆಃ</u>

| | | | |
|---|---|---|---|
| **ಹೆಸರು** | : | ಪರಶುರಾಮಪ್ಪ | ಚಾಸಾಃ **9** ಫ್ರಾಸಾಃ **2** |
| **ತಂದೆಯ ಹೆಸರು** | : | ಹಾಲಪ್ಪ | |
| **ವಯಸ್ಸು** | : | 40 ವರ್ಷ | |
| **ವೃತ್ತಿ** | : | ವ್ಯವಸಾಯ | |
| **ವಾಸಸ್ಥಳ** | : | ತಕ್ಕನಹಳ್ಳಿ ಗ್ರಾಮ | |

ದಿನಾಂಕಃ **28-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದಃ</u>

1 ಮತ್ತು 3 ನೇ ಆರೋಪಿತರು ಗೊತ್ತಿಲ್ಲ. ಚಾಸಾ-8 ಗೊತ್ತು. ಈಗೇ ಸುಮಾರು 6 ವರ್ಷಗಳ ಹಿಂದೆ ನನ್ನ ವೈಯಕ್ತಿಕ ಕೆಲಸದ ಮೇರೆಗೆ ಹೊನ್ನಾಳಿ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರ ಕೋರಿಕೆಯ ಮೇರೆಗೆ 3 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಸ್ಥಳ ಮಹಜರ್ ಕ್ರಮ ಜರುಗಿಸಿ ಕಚ್ಚಾ ನಕಾಶೆಯನ್ನು ತಯಾರಿಸಿರುವುದಿಲ್ಲ. ಸಾಕ್ಷಿಯು ನಿಪಿ-4 ಮತ್ತು 5 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಸ್ಥಳ ಮಹಜರ್ ಸಮಯದಲ್ಲಿ ನೀಡಿದ ನೋಟೀಸ್ ನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು, ಸ್ಥಳ ಮಹಜರ್ ನ್ನು ಈಗಾಗಲೇ ನಿಪಿ-2 ಎಂದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು, ಕಚ್ಚಾ ನಕಾಶೆಯನ್ನು ಈಗಾಗಲೇ ನಿಪಿ-3

ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ದಿಃ 09.12.2019 ರಂದು ಪೊಲೀಸರಿಂದ ನಿಪಿ-1 ರಂತೆ ನೋಟೀಸ್ ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 09.12.2019 ರಂದು ಸಂಜೆ 5.15 ರಿಂದ 6.15 ಗಂಟೆ ಸಮಯದಲ್ಲಿ 3 ನೇ ಆರೋಪಿ ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-8 ರವರ ಸಮಕ್ಷಮ ನಿಪಿ-2 ರಂತೆ ಸ್ಥಳ ಮಹಜರ್ ಕ್ರಮ ಜರುಗಿಸಿ ,ನಿಪಿ-3 ರಂತೆ ಕಚ್ಚಾ ನಕಾಶೆಯನ್ನು ತಯಾರಿಸಿ , ನಿಪಿ-4 ಮತ್ತು 5 ರಂತೆ ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-8 ರಂತೆ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.